ಅಂತ ಅವಳ ಮಗ್ಗುಲಲ್ಲಿ ಕೂತೇ ಇರಲಿಕ್ಕೆ ಸಾಯ್ತಾನೆ. ತಾನು ಫೋನು ಮಾಡಿದರೆ ಆಂ, ಊಂ ಕೇಳ್ತಾ ಇಲ್ಲ, ನೆಟ್‌ವರ್ಕ್ ಇಲ್ಲ ಅಂತ ಫೋನು ಇಡ್ತಾನೆ, ಬೋಳಿಮಗ. ಇವತ್ತು ಅವನ ಗ್ರಾಚಾರ ಬಿಡಿಸದಿದ್ರೆ ನಾನು ಆಟಕ್ಕೊಂದೇ ವೀರಭದ್ರ ಎಂದೆನಿಸಿಕೊಳ್ಳುವ ಗಪ್ಪತಿಯ ಮಗಳೇ ಅಲ್ಲ. ಹೀಗೆಂದು ಉರಿಯುತ್ತ, ಮತ್ತೆಮತ್ತೆ ಕೆದರಿ ಉರಿ ಹೆಚ್ಚಿಸಿಕೊಳ್ಳುತ್ತ ಸೀರೆ ಉಟ್ಟ ಅಗ್ನಿಕುಂಡದ ಹಾಗೆ ಹೊರಟ ನಾಗಲಕ್ಷ್ಮಿ ಉರುಫ್ ನಾಗಕ್ಕ ಮೊದಲಿನಿಂದಲೂ ಸಿಟ್ಟಿನ ಸ್ವಭಾವದವಳೇ.

ಗುಡ್ಡೇಮಠದ ಮಹಾಲಿಂಗೇಶ್ವರ ಯಕ್ಷಗಾನ ಮೇಳದಲ್ಲಿ ವೀರಭದ್ರನ ಪಾತ್ರ ಹಾಕುತ್ತಿದ್ದ ಗಪ್ಪತಿಯ ಏಕೈಕ ಮಗಳೇ ನಾಗಲಕ್ಷ್ಮಿ. ವರ್ಷದ ಎಂಟು ತಿಂಗಳು ಮೇಳದೊಂದಿಗೆ ತಿರುಗುತ್ತ ಉಳಿದ ನಾಕು ತಿಂಗಳಲ್ಲಿ ಕೊಟ್ಟೆ ಕೊನೆ, ಸೊಪ್ಪು-ಮಣ್ಣು ಎಂದು ಗೇಯುತ್ತ ಸಂಸಾರ ಮಾಡುತ್ತಿದ್ದ ಗಪ್ಪತಿಯ ಹೆಂಡತಿ ಗಂಗೆ ಮೂರು ಮಕ್ಕಳನ್ನು ಹೆತ್ತಿದ್ದಳಾದರೂ ಒಂದೂ ಉಳಿದಿರಲಿಲ್ಲ. ಕಡೆಗೆ ಯಾರೋ ಹಿರಿಯರು ನಾಗದೋಷವಿರಬಹುದೆಂದು ಸಲಹೆ ಕೊಟ್ಟ ಮೇಲೆ ಕುಕ್ಕೆ ಸುಬ್ರಮಣ್ಯಕ್ಕೆ ಹೋಗಿ ಹರಕೆ ಹೇಳಿಕೊಂಡ ಮೇಲೆ ನಾಗಲಕ್ಷ್ಮಿ ಹುಟ್ಟಿದ್ದು. ಅಪರೂಪದ ಮಗಳು ಅಂತ ಅಪ್ಪ-ಅಮ್ಮ ಮುದ್ದು ಮಾಡಿದ್ದೇ ಮಾಡಿದ್ದು. ಅವಳು ಹೇಳಿದ ಮಾತನ್ನು ತೆಗೆದು ಹಾಕುತ್ತಲೇ ಇರಲಿಲ್ಲ. ಅಪ್ಪನ ಜೊತೆ ಆಟಕ್ಕೂ ಹೋಗಿ ಅವನ ವೀರಭದ್ರನ ಪಾತ್ರ ನೋಡಿ ಬರುತ್ತಿದ್ದ ನಾಗಲಕ್ಷ್ಮಿ ಮನೆಯಲ್ಲಿ ಅದೇ ಸಿಟ್ಟು-ಕೋಪ-ತಾಪಗಳನ್ನು ಅನುಕರಣೆ ಮಾಡುತ್ತಿದ್ದಳು. ತಮ್ಮ ಮಗಳು ದೈವಾಂಶ ಸಂಭೂತೆ ಅಂತಲೇ ಭಾವಿಸಿಕೊಂಡಿದ್ದ ಗಂಗೆ-ಗಣಪರು ಮಗಳಿಗೆ ಏನೆಂದರೆ ಏನೂ ಹೇಳುತ್ತಿರಲಿಲ್ಲ. ಅವರ ಕೊಂಡಾಟಗಳನ್ನೂ, ನಾಗಿಯ ಮೊಂಡಾಟ-ಭಂಡಾಟಗಳನ್ನು ಹತ್ತಿರದಿಂದ ಬಲ್ಲವರೆಲ್ಲ ಈ ನಮೂನಿ ಮಗಳನ್ನು ಬೆಳೆಸಿದ್ರೆ ನಾಳೆ ಆ ಕೂಸು ಸಂಸಾರ ಮಾಡದಾರೂ ಹೌದಾ? ಎಂದು ಮಾತಾಡಿಕೊಂಡರು. ಆಸುಪಾಸಿನಲ್ಲೆಲ್ಲೂ ಗಂಡು ಸಿಗದೇ ಗಪ್ಪತಿ ತನ್ನ ಮಗಳಿಗಾಗಿ ದೂರದ ಊರಿನ ಗಂಡುಗಳ ತಲಾಶೆಗೆ ಇಳಿದ. ಆಗ ಅವನ ಮೇಳದ ಭಾಗವತರೊಬ್ಬರು ಪದುಮಣ್ಣನ ಬಗ್ಗೆ ಹೇಳಿ, 'ಗೋವಿನಂಥಾ ಸಾಧು ಮನುಷ್ಯ, ನಿನ್ನ ಮಗಳು ಹೇಳ್ದಾಂಗೆ ಕೇಳ್ಕಂಡು ಇರ್ತ ನೋಡು' ಅಂತ ಶಿಫಾರಸು ಮಾಡಿದರು.



ನಮ್ಮ ಪದುಮಣ್ಣ ಇದ್ದಾನಲ್ಲ ಈತ ಶಾಲೆಗೆ ಕಾಲಿಟ್ಟ ಕ್ಷಣದಿಂದ ಅಂದರೆ ತನ್ನ ನಾಲ್ಕನೆಯ ವಯಸ್ಸಿನಿಂದಲೇ ದುಡಿಯಲಾರಂಭಿಸಿದ್ದಾನೆಂದರೆ ನೀವು ನಂಬಲೇಬೇಕು. ಅವನು ಶಾಲೆಗೆ ಹೋಗುವ ಕಾಲದಲ್ಲಿ ಅಂದರೆ ಈಗೊಂದು ಮೂವತ್ತು ವರ್ಷದ ಹಿಂದೆ ಸರ್ಕಾರಿ ಶಾಲೆಗಳಲ್ಲಿ ಸರ್ಕಾರದ ವತಿಯಿಂದ ಪ್ರತಿ ಮಧ್ಯಾಹ್ನ ಉಪ್ಪಿಟ್ಟು ಕೊಡುತ್ತಿದ್ದರು. ದೊಡ್ಡಗಾತ್ರದ ಕಾಳಿನ ಜವೆಗೋಧಿಯಿಂದ ತಯಾರಿಸಿದ ಉಪ್ಪಿಟ್ಟು ಬಿಸಿಬಿಸಿಯಾಗಿ ರುಚಿಯಾಗಿರುತ್ತಿತ್ತು. ಹಾಜರಿಪುಸ್ತಕದಲ್ಲಿ ನಮೂದಿಸಿದ ಹುಡುಗರ ಸಂಖ್ಯೆಗನುಗುಣವಾಗಿ ಉಪ್ಪಿಟ್ಟು ಬರುತ್ತಿತ್ತು. ಆದರೆ ನಿಜವಾಗಿಯೂ ಹಾಜರಿರುತ್ತಿದ್ದವರು ಅದರ ಅರ್ಧದಷ್ಟು ಹುಡುಗರು ಮಾತ್ರ. ಆದ್ದರಿಂದ ಹುಡುಗರು ತಮಗೆ ಸಾಕೆನ್ನಿಸುವಷ್ಟು ಉಪ್ಪಿಟ್ಟು ಹಾಕಿಸಿಕೊಳ್ಳಬಹುದಿತ್ತು. ಪದುಮಣ್ಣ ಶಾಲೆಗೆ ಕಾಲಿಟ್ಟ ದಿನವೇ ದೊಡ್ಡದೊಂದು ಪ್ಲಾಸ್ಟಿಕ್ ಕವರಿನಲ್ಲಿ ಉಪ್ಪಿಟ್ಟು ಹಾಕಿಸಿಕೊಂಡ. ಸೀದಾ ಶಾಲೆಯ ಹೊರಗೆ ಬಂದ. ಅಲ್ಲಿ ರಸ್ತೆಯ ಪಕ್ಕದ ಕಾಲುವೆಗಳನ್ನು ಅಗೆಯುವ ಕೆಲಸದಲ್ಲಿ ತೊಡಗಿರುವ ಜನರು ಕೂತಿದ್ದರು. ಅವರೆದುರು ಘಮಘಮಿಸುವ ಉಪ್ಪಿಟ್ಟು ತೋರಿಸಿದ. ತಮ್ಮ ಡಬ್ಬಿಗಳಲ್ಲಿರುವ ತಂಗಳಿಗಿಂತ ಈ ಉಪ್ಪಿಟ್ಟು ತಿನ್ನುವುದು ಬಹಳ ಉತ್ತಮವೆಂದು ಭಾವಿಸಿದ ಅವರು ಎರಡು ರೂಪಾಯಿ, ಮೂರು ರೂಪಾಯಿ ಮುಂತಾಗಿ ಹಣ ಕೊಟ್ಟು ಉಪ್ಪಿಟ್ಟು ಕೊಂಡರು. ಹೀಗೆ ಶಾಲೆಗೆ ಹೋಗತೊಡಗಿದಂದಿನಿಂದಲೇ ಗಳಿಕೆ ಮಾಡಲಾರಂಭಿಸಿದ ಅದ್ಭುತ ಪ್ರತಿಭಾರತ್ನ